**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು** 6
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 6/11/20

# ಹರ್ಯಾಣದಲ್ಲಿ ಖಾಸಗಿ ವಲಯದ ಶೇ.75 ಹುದ್ದೆ ಸ್ಥಳೀಯರಿಗೆ ಮೀಸಲು

**ಚಂಡೀಗಢ:** ರಾಜ್ಯದ ಖಾಸಗಿ ವಲಯದ ಶೇ.75ರಷ್ಟು ಪ್ರಮಾಣದ ಉದ್ಯೋಗಗಳನ್ನು ಸ್ಥಳೀಯರಿಗೆ ಮೀಸಲಾಗಿರಿಸಲು ಅವಕಾಶ ಕಲ್ಪಿಸುವ ಮಸೂದೆಗೆ ಹರ್ಯಾಣ ವಿಧಾನಸಭೆ ಅಂಗೀಕಾರ ನೀಡಿದೆ. ಸರ್ಕಾರದ ಮೈತ್ರಿ ಪಕ್ಷ ಜನನಾಯಕ ಜನತಾ ಪಕ್ಷದ ಚುನಾವಣಾ ಪ್ರಣಾಳಿಕೆ ಈಡೇರಿಸುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಿಎಂ ಮನೋಹರ ಲಾಲ್ ಖಟ್ಟರ್ ನೇತೃತ್ವದ ಬಿಜೆಪಿ ಸರ್ಕಾರ ತಿಳಿಸಿದೆ. ತನ್ಮೂಲಕ ಇಂಥ ಕಾಯ್ದೆ ಜಾರಿಗೆ ತಂದ ಮಧ್ಯಪ್ರದೇಶ, ಆಂಧ್ರಪ್ರದೇಶ ಸೇರಿದಂತೆ ಇನ್ನಿತರ ರಾಜ್ಯಗಳ ಪಟ್ಟಿಗೆ ಹರ್ಯಾಣ ಹೊಸ ಸೇರ್ಪಡೆ. ರಾಜ್ಯದಲ್ಲಿರುವ ಖಾಸಗಿ ಸಂಸ್ಥೆಗಳು, ಟ್ರಸ್ಟ್‌ಗಳು ಸೇರಿದಂತೆ ಇನ್ನಿತರ ಕಂಪನಿಗಳು ಸ್ಥಳೀಯರಿಗೆ ಶೇ.75ರಷ್ಟು ಹುದ್ದೆ ಮೀಸಲಿಡುವ ಈ ಮಸೂದೆ ಕಾಯ್ದೆಯಾಗಿ ರೂಪುಗೊಳ್ಳಲು ರಾಜ್ಯಪಾಲರ ಅಂಕಿತವೊಂದೇ ಬಾಕಿಯಿದೆ. ಮುಂಗಾರು ಅಧಿವೇಶನದ 2ನೇ ಭಾಗವಾಗಿ ನಡೆಯುತ್ತಿರುವ ಗುರುವಾರದ ಕಲಾಪದಲ್ಲಿ ಡಿಸಿಎಂ ದುಷ್ಯಂತ್ ಚೌಟಾಲ ಅವರು ಈ ಮಸೂದೆಯನ್ನು ಮಂಡಿಸಿದರು. ಈ ಮಸೂದೆಯ ಅಂಗೀಕಾರದೊಂದಿಗೆ ರಾಜ್ಯದ ಜನತೆಗೆ ನೀಡಿದ್ದ ಭರವಸೆಯನ್ನು ನಮ್ಮ ಸರ್ಕಾರ ಈಡೇರಿಸಿದೆ ಎಂದಿದ್ದಾರೆ.